ಕರ್ನಾಟಕ ಸರ್ಕಾರ
(ತಾಂತ್ರಿಕ ಶಿಕ್ಷಣ ಇಲಾಖೆ)

ಸಂಖ್ಯೆ: ಡಿಟಿಇ 02 ಡಿವಿಪಿ (1) 2023

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ 06.03.2024.

:ಹಿಂಬರಹ:

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ಹೆಚ್ಚಿಸುವ ಮತ್ತು ಇತರೆ ಸೌಲಭ್ಯಗಳನ್ನು ನೀಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 52 ಡಿಟಿಇ 2024, ಬೆಂಗಳೂರು. ದಿನಾಂಕ 04.03.2024.

ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನ, ಇಡಿಗಂಟು ಮತ್ತು ಅರೋಗ್ಯ ವಿಮೆಗೆ ಸಂಬಂಧಿಸಿದ ಸರ್ಕಾರಿ ಆದೇಶದಂತೆ ಮುಂದಿನ ಕ್ರಮ ವಹಿಸಲು ಸೂಚಿಸಲಾಗಿದೆ.

ನಿರ್ದೇಶಕರು.
ತಾಂತ್ರಿಕ ಶಿಕ್ಷಣ ಇಲಾಖೆ.

ಇವರಿಗೆ,

**ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆ/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.**

ಪ್ರತಿ

1. ಆಯುಕ್ತರ ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು.
2. ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು.
3. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4. ಲೆಕ್ಕಾಧಿಕಾರಿಗಳು (ಬಿಲ್ಸ್). ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
5. ಇ.ಎಸ್.ಟಿ(1) ವಿಭಾಗ, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ಹೆಚ್ಚಿಸುವ ಮತ್ತು ಇತರೆ ಸೌಲಭ್ಯಗಳನ್ನು ನೀಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 236 ಟಿಪಿಇ 2007, ದಿನಾಂಕ:01.12.2008.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019.
3. ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020.
4. ಆಯುಕ್ತಾಲಯದ ಏಕ ಕಡತ ಸಂಖ್ಯೆ:DCE/APT1/GFD/2/2024 (ಗಣಕ ಸಂಖ್ಯೆ:1284047)
5. ಆಯುಕ್ತಾಲಯದ ಏಕ ಕಡತ ಸಂಖ್ಯೆ:DCE/APT1/GFH/1/2024 (ಗಣಕ ಸಂಖ್ಯೆ:1296448)
6. ಆಯುಕ್ತಾಲಯದ ಏಕ ಕಡತ ಸಂಖ್ಯೆ:DCE/APT1/GFD/4/2023 (ಗಣಕ ಸಂಖ್ಯೆ:1273353)

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಸಂಭಾವನೆಯನ್ನು ಕ್ರಮವಾಗಿ ರೂ.7,500/- ಹಾಗೂ ರೂ.10,000/-ಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಮಾಸಿಕ ಗೌರವ ಧನವನ್ನು ರೂ.7,500/- ರಿಂದ 12,500/- ಕ್ಕೆ ಹಾಗೂ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಗೌರವ ಧನವನ್ನು ರೂ.10,000/- ಗಳಿಂದ 15,000/- ಕ್ಕೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.15,000/- ಗಳನ್ನು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.12,500/-ಗಳನ್ನು ನಿಗದಿಪಡಿಸಲಾಗಿರುತ್ತದೆ. ವಿವರ ಕೆಳಕಂಡಂತಿವೆ.

| ಕ್ರ. ಸಂ. | ಸಂಸ್ಥೆ | ಕನಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ |
|---|---|---|---|---|
| 1 | ಇಂಜಿನಿಯರಿಂಗ್ ಕಾಲೇಜು | 16 ಗಂಟೆ | 32 ಗಂಟೆ | ರೂ.15,000/- |

-----2

Discuss

6/3/24

| | | | | |
|---|---|---|---|---|
| 2 | ಪಾಲಿಟೆಕ್ನಿಕ್ ಹಾಗೂ ಕಿರಿಯ ತಾಂತ್ರಿಕ ಶಾಲೆಗಳು | 20 ಗಂಟೆ | 36 ಗಂಟೆ | ರೂ.12,500/- |

ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಬೇಡಿಕೆಗಳ ಕುರಿತು ಚರ್ಚಿಸಲಾಯಿತು.

ಮುಂದುವರೆದು, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು /ಪಾಲಿಟೆಕ್ನಿಕ್ ಕಾಲೇಜುಗಳು /ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅತಿಥಿ ಉಪನ್ಯಾಸಕರ ಬೇಡಿಕೆ/ಸಮಸ್ಯೆಗಳ ಕುರಿತಂತೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:06.01.2024 ರಂದು ಸಭೆ ಜರುಗಿದ್ದು, ಸದರಿ ಸಭೆಯಲ್ಲಿ ಅತಿಥಿ ಉಪನ್ಯಾಸಕರ ಕೆಲವು ಬೇಡಿಕೆಗಳನ್ನು ಈಡೇರಿಸುವ ಕುರಿತು ಚರ್ಚಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (4), (5) ಮತ್ತು (6)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಪಾಲಿಟೆಕ್ನಿಕ್ ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಆರೋಗ್ಯದ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ಒದಗಿಸಲು (ಮಾಸಿಕವಾಗಿ ರೂ.400 ಅನ್ನು ವಂತಿಕೆಯನ್ನಾಗಿ ಅವರಿಂದ ಕಟಾಯಿಸಿ, ಇನ್ನುಳಿದ ರೂ.400 ಅನ್ನು ಸರ್ಕಾರದ ವತಿಯಿಂದ ಭರಿಸಲು ಉದ್ದೇಶಿಸಿದ್ದು, ಹೀಗೆ ಒಟ್ಟು ರೂ.800 ಗಳನ್ನು ಆರೋಗ್ಯ ವಿಮೆಗೆ ಪಾವತಿಸಲು ಉದ್ದೇಶಿಸಿದ್ದು) ಹಾಗೂ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿ, 60 ವರ್ಷ ಮೀರಿದ ನಂತರ ಇವರಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/-ರಂತೆ ಗರಿಷ್ಠ 5.00 ಲಕ್ಷಗಳ ಮೊತ್ತವನ್ನು ಇಡಿಗಂಟು ಮೊತ್ತವಾಗಿ ಮಂಜೂರು ಮಾಡುವಂತೆ ಹಾಗೂ ಸದರಿ ಅತಿಥಿ ಉಪನ್ಯಾಸಕರುಗಳಿಗೆ ಅವರುಗಳು ಸಲ್ಲಿಸಿರುವ ಸೇವಾವಧಿಯ ಮೇಲೆ ಗೌರವಧನವನ್ನು ಪ್ರಸ್ತುತ ಇರುವ ಕಾರ್ಯಭಾರಕ್ಕನುಗುಣವಾಗಿ ಈ ಕೆಳಕಂಡಂತೆ ಹೆಚ್ಚಿಸಿ ಮಂಜೂರು ಮಾಡಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

| ಕ್ರ. ಸಂ. | ಸಂಸ್ಥೆಗಳು | ಹೆಚ್ಚಿಸಲು ಪ್ರಸ್ತಾಪಿಸಿರುವ ಗೌರವಧನ |
|---|---|---|
| 1. | 5 ವರ್ಷಕ್ಕಿಂತ ಕಡಿಮೆ ಸೇವಾವಧಿ | 5,000/- |
| 2. | 5 ವರ್ಷದಿಂದ 10 ವರ್ಷಗಳ ಸೇವಾವಧಿ | 6,000/ |
| 3. | 10 ವರ್ಷದಿಂದ 15 ವರ್ಷಗಳ ಸೇವಾವಧಿ | 7,000/ |
| 4. | 15 ವರ್ಷ ಮೇಲ್ಪಟ್ಟು ಸೇವಾವಧಿ | 8,000/ |

-----3

ಸದರಿ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024**
**ಬೆಂಗಳೂರು, ದಿನಾಂಕ: 4ನೇ ಮಾರ್ಚ್ 2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಪಾಲಿಟೆಕ್ನಿಕ್ ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಅತಿಥಿ ಉಪನ್ಯಾಸಕರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ದಿನಾಂಕ:01.01.2024 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ.

1. **ಗೌರವಧನ:**

ಪ್ರಸ್ತುತ, ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020ರನ್ವಯ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಗೌರವಧನ ರೂ.15,000/- ಗಳನ್ನು ಹಾಗೂ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಗೌರವಧನ ರೂ.12,500/-ಗಳನ್ನು ಪಾವತಿಸಲಾಗುತ್ತಿದ್ದು ಮುಂದುವರೆದು, ಪ್ರಸ್ತುತ ಸಲ್ಲಿಸಿರುವ ಸೇವಾ ಅವಧಿಗೆ ಅನುಗುಣವಾಗಿ ಈ ಕೆಳಕಂಡಂತೆ ಗೌರವಧನವನ್ನು ಹೆಚ್ಚಿಸಿ ಆದೇಶಿಸಲಾಗಿದೆ.

| ಕ್ರ. ಸಂ. | ಸೇವಾವಧಿ | ಪ್ರಸ್ತುತ ಹೆಚ್ಚಿಸಲಾದ ಗೌರವಧನ(ರೂ.ಗಳಲ್ಲಿ) |
|---|---|---|
| 1. | 5 ವರ್ಷಕ್ಕಿಂತ ಕಡಿಮೆ ಸೇವಾವಧಿ | 5,000/- |
| 2. | 5 ವರ್ಷದಿಂದ 10 ವರ್ಷಗಳ ಸೇವಾವಧಿ | 6,000/ |
| 3. | 10 ವರ್ಷದಿಂದ 15 ವರ್ಷಗಳ ಸೇವಾವಧಿ | 7,000/ |
| 4. | 15 ವರ್ಷ ಮೇಲ್ಪಟ್ಟು ಸೇವಾವಧಿ | 8,000/ |

2. **ಇಡಿಗಂಟು:**

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ ಪಾಲಿಟೆಕ್ನಿಕ್ ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿ, 60 ವರ್ಷ ಮೀರಿದ ನಂತರ ಅಂತಹ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ರಂತೆ, ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಿದೆ.

-----4

3. **ಆರೋಗ್ಯ ವಿಮೆ**

ಅತಿಥಿ ಉಪನ್ಯಾಸಕರ ಆರೋಗ್ಯದ ಹಿತದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400 + ಸರ್ಕಾರದಿಂದ ರೂ.400 ಒಟ್ಟು ರೂ.800/-) ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ಮೇಲ್ಕಂಡ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರುಗಳಿಗೆ ಕಲ್ಪಿಸಲು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಸೂಕ್ತ ಕ್ರಮ ಕೈಗೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 09 ವೆಚ್ಚ-8/2024, ದಿನಾಂಕ:02.03.2024 ಮತ್ತು 04.03.2024ಗಳಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

4/3/2024

(ಮಹಾಂತೆಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), (ಎ ಮತ್ತು ಎಸ್.ಎಸ್.ಎ) ಮತ್ತು (ಇ ಮತ್ತು ಆರ್.ಎಸ್.ಎ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
6. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಪಾಲಿಟೆಕ್ನಿಕ್ ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಿಗೆ (ಆಯುಕ್ತಾಲಯದ ಮುಖಾಂತರ)
7. ಇ-ಆಡಳಿತ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)/ ಶಾಖಾ ರಕ್ಷಾ ಕಡತ.

**ಪ್ರತಿಗಳು:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳ ಆಪ್ತ ಶಾಖೆ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು.